# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹಿಂದುಳಿದ ವರ್ಗಗಳಿಗೆ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಸ್ವತಂತ್ರವಾದ ಮತ್ತು ಸಮರ್ಪಿತವಾದ ಆಯೋಗದ ಮೂಲಕ ಅಧ್ಯಯನ ನಡೆಸುವ ಬಗ್ಗೆ.

**ಓದಲಾಗಿದೆ:**
1. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ದಿನಾಂಕ: 11.05.2010.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ/114/ಬಿಸಿಎ/2022, ದಿನಾಂಕ: 07.05.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ. (1) ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ (ಸಿವಿಲ್): 356/1994 ರಲ್ಲಿ ಡಾ. ಕೃಷ್ಣಮೂರ್ತಿ ಮತ್ತಿತರರು ವಿರುದ್ಧ ಕೇಂದ್ರ ಸರ್ಕಾರ ಮತ್ತಿತರರು ಹಾಗೂ ಮಹಾರಾಷ್ಟ್ರ ರಾಜ್ಯದ ಮತ್ತು ಮಧ್ಯಪ್ರದೇಶ ರಾಜ್ಯದ ಪ್ರತ್ಯೇಕ ಪ್ರಕರಣಗಳಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಪಂಚಾಯತ್ ರಾಜ್ ಸಂಸ್ಥೆಗಳ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯವನ್ನು ಕಲ್ಪಿಸುವ ಸಲುವಾಗಿ ಸ್ವತಂತ್ರವಾದ ಮತ್ತು ಸಮರ್ಪಿತವಾದ ಒಂದು ಆಯೋಗವನ್ನು ರಚಿಸುವಂತೆ ಸೂಚಿಸಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (2) ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ಮಾನ್ಯ ಡಾ.ಕೆ. ಭಕ್ತವತ್ಸಲ (ನಿವೃತ್ತ ನ್ಯಾಯಮೂರ್ತಿಗಳು) ಇವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿದೆ. ಈ ಆದೇಶದನ್ವಯ ಆಯೋಗದ ಕಾರ್ಯವ್ಯಾಪ್ತಿ ಹಾಗೂ ಆಯೋಗದ ಅವಧಿಯನ್ನು ನಿಗದಿಪಡಿಸಬೇಕಿರುತ್ತದೆ.

ಅದರಂತೆ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ಮಾನ್ಯ ಡಾ.ಕೆ.ಭಕ್ತವತ್ಸಲ (ನಿವೃತ್ತ ನ್ಯಾಯಮೂರ್ತಿಗಳು) ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಆಯೋಗಕ್ಕೆ ಕಾರ್ಯವ್ಯಾಪ್ತಿಯನ್ನು ಹಾಗೂ ಆಯೋಗದ ಅವಧಿಯನ್ನು ನಿಗದಿಪಡಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 114 ಬಿಸಿಎ 2022,**
**ಬೆಂಗಳೂರು, ದಿನಾಂಕ: 16.05.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ

ಶಿಫಾರಸ್ಸು ಮಾಡಲು ಮಾನ್ಯ ಡಾ.ಕೆ.ಭಕ್ತವತ್ಸಲ (ನಿವೃತ್ತ ನ್ಯಾಯಮೂರ್ತಿಗಳು) ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಆಯೋಗಕ್ಕೆ ಕಾರ್ಯವ್ಯಾಪ್ತಿ ಹಾಗೂ ಅವಧಿಯನ್ನು ಈ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಿದೆ.

1. ಭಾರತದ ಸಂವಿಧಾನದಲ್ಲಿ ಉಲ್ಲೇಖಿಸಿರುವ ಅಂಶಗಳನ್ವಯ ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ(ಸಿವಿಲ್): 356/1994 ರಲ್ಲಿ ಡಾ.ಕೃಷ್ಣಮೂರ್ತಿ ಮತ್ತಿತರರು ವಿರುದ್ದ ಕೇಂದ್ರ ಸರ್ಕಾರ ಮತ್ತಿತರರು ಹಾಗೂ ಮಹಾರಾಷ್ಟ್ರ ರಾಜ್ಯದ ಮತ್ತು ಮಧ್ಯಪ್ರದೇಶ ರಾಜ್ಯದ ಪ್ರತ್ಯೇಕ ಪ್ರಕರಣಗಳಲ್ಲಿ ನೀಡಿರುವ ತೀರ್ಪುಗಳಂತೆ ಹಾಗೂ ಕರ್ನಾಟಕ ರಾಜ್ಯದಲ್ಲಿ ಈಗಾಗಲೇ ಹಿಂದುಳಿದ ವರ್ಗಗಳಿಗೆ ಒದಗಿಸಿರುವ ರಾಜಕೀಯ ಮೀಸಲಾತಿಯ ಹಿನ್ನೆಲೆಯಲ್ಲಿ ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳ ರಾಜಕೀಯ ಹಿಂದುಳಿದಿರುವಿಕೆಯನ್ನು ವ್ಯಾಖ್ಯಾನಿಸುವುದು.

2. ಪ್ರತಿಯೊಂದು ಗ್ರಾಮೀಣ ಮತ್ತು ನಗರ ಸ್ಥಳೀಯ ಸಂಸ್ಥೆವಾರು ಹಿಂದುಳಿದ ವರ್ಗಗಳ ರಾಜಕೀಯ ಪ್ರಾತಿನಿಧ್ಯದ ಬಗ್ಗೆ ಲಭ್ಯವಿರುವ ದಾಖಲೆಗಳ, ಅಂಕಿ-ಅಂಶಗಳ, ವರದಿಗಳ ಸಂಪೂರ್ಣ ವಾಸ್ತವಿಕ ಮತ್ತು ವೈಜ್ಞಾನಿಕ ತನಿಖೆಯನ್ನು ನಡೆಸಿ, ಸಮಗ್ರ ವಿಚಾರಣೆಯಲ್ಲಿ ಕಂಡುಬರುವ ಸಮರ್ಥನೀಯ ಅಂಶಗಳನ್ನು ಗುರುತಿಸಿ, ಮೌಲ್ಯಮಾಪನ ಮಾಡಿ ಪ್ರತಿ ಸ್ಥಳೀಯ ಸಂಸ್ಥೆವಾರು ಹಿಂದುಳಿದ ವರ್ಗಗಳಿಗೆ ಪ್ರವರ್ಗವಾರು ಪ್ರತಿಶತವಾರು ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಶಿಫಾರಸ್ಸು ಮಾಡುವುದು.

3. ಸರ್ಕಾರಕ್ಕೆ ಆಯೋಗವು ತನ್ನ ವರದಿಯನ್ನು ಮೂರು ತಿಂಗಳ ಅವಧಿಯೊಳಗೆ ಸಲ್ಲಿಸತಕ್ಕದ್ದು.

4. ಆಯೋಗವು ಈ ಕಾರ್ಯಕ್ಕೆ ಅಗತ್ಯವಾದ ಮಾಹಿತಿ ಮತ್ತು ಅಂಕಿ ಅಂಶಗಳನ್ನು ಪಡೆಯಲು ಕೇಂದ್ರ ಮತ್ತು ರಾಜ್ಯ ಸರ್ಕಾರದ ಕಛೇರಿಗಳು, ಸಾರ್ವಜನಿಕ ಉದ್ಯಮಗಳು, ಸಂಸ್ಥೆಗಳು, ವಿಶ್ವವಿದ್ಯಾನಿಲಯಗಳು ಮತ್ತು ಇತರೆ ಪ್ರಾಧಿಕಾರಿಗಳಿಂದ ಹಾಗೂ ವ್ಯಕ್ತಿಗಳಿಂದ ನೆರವು ಪಡೆಯುವುದು, ಪ್ರಾಯೋಗಿಕ ಅಂಕಿ ಅಂಶಗಳನ್ನು ವಿಶ್ಲೇಷಿಸಲು ಮತ್ತು ಆಯೋಗದ ಕೆಲಸವನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಅಗತ್ಯವಾದಾಗ ತಜ್ಞರು ಮತ್ತು ಸಂಶೋಧಕರನ್ನು ಪಡೆಯುವುದು, ಮೇಲಿನ ಉದ್ದೇಶಗಳನ್ನು ಸಾಧಿಸಲು ಕರ್ನಾಟಕ ರಾಜ್ಯದ ವಿವಿಧ ಭಾಗಗಳಿಗೆ ಅಧ್ಯಯನ ಭೇಟಿಗಳನ್ನು ಅವಶ್ಯಕತೆಯನುಸಾರ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16/5/2022

**(ಉಮಾದೇವಿ.ಆರ್)**
ಸರ್ಕಾರದ ಉಪಕಾರ್ಯದರ್ಶಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

16/5/22

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

...3